RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ–I<br>Part–I | ಬೆಂಗಳೂರು, ಗುರುವಾರ, ಮೇ ೨೪, ೨೦೧೮ (ಜ್ಯೇಷ್ಠ ೩, ಶಕ ವರ್ಷ ೧೯೪೦)<br>*Bengaluru, Thursday, May 24, 2018 (Jyeshta 3, Shaka Varsha 1940)* | ನಂ. ೬೭೯<br>No. 679 |
|---|---|---|

**ಶಿಕ್ಷಣ ಸಚಿವಾಲಯ**

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಮಕ್ಕಳನ್ನು ಪ್ರಾಥಮಿಕ ಶಾಲಾ ಒಂದನೇ ತರಗತಿಗೆ ದಾಖಲಾತಿ ಮಾಡಲು ವಯೋಮಿತಿಯನ್ನು ನಿರ್ಧರಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ :ಇಡಿ 51 ಪಿಜಿಸಿ 2016 (ಭಾಗ), ದಿನಾಂಕ : 08–02–2016.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಜ್ಞಾಪನ ಸಂಖ್ಯೆ : ಎಡಿಎಂ2(2)ಪ್ರಾ.ಶಾ.ದಾ–01/2016–17, ದಿನಾಂಕ:18-01-2017.
3. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಜ್ಞಾಪನ ಸಂಖ್ಯೆ : ಎಡಿಎಂ2(2)ಪ್ರಾ.ಶಾ.ದಾ–01/2016–17, ದಿನಾಂಕ:07–06–2017.

**ಪ್ರಸ್ತಾವನೆ :**

ಮೇಲೆ ಓದಲಾದ(1)ರ ಆದೇಶದಲ್ಲಿ 2016–17ನೇ ಶೈಕ್ಷಣಿಕ ಸಾಲಿನಿಂದ ಆರ್.ಟಿ.ಇ ಕಾಯ್ದೆ–2009ರ ಸೆಕ್ಷನ್ 12(1)(ಸಿ) ಅಡಿಯಲ್ಲಿ ಅನುದಾನರಹಿತ ಹಾಗೂ ಅಲ್ಪಸಂಖ್ಯಾತ ಸಂಸ್ಥೆಗಳ ವಿದ್ಯಾರ್ಥಿಗಳ ದಾಖಲಾತಿ ಪ್ರವೇಶಾವಕಾಶಕ್ಕೆ ಸಂಬಂಧಿಸಿದಂತೆ ಎಲ್.ಕೆ.ಜಿ ತರಗತಿಗೆ 3 ವರ್ಷ 10 ತಿಂಗಳಿನಿಂದ 4 ವರ್ಷ 10 ತಿಂಗಳು ಹಾಗೂ 1ನೇ ತರಗತಿಗೆ 5 ವರ್ಷ 10 ತಿಂಗಳಿನಿಂದ 6 ವರ್ಷ 10 ತಿಂಗಳು ವಯೋಮಿತಿಯನ್ನು ನಿಗಧಿಪಡಿಸಿ ಆದೇಶಿಸಲಾಗಿದೆ.

ಆದರೆ ಮೇಲೆ ಓದಲಾದ (2)ರ ಜ್ಞಾಪನ ದಿನಾಂಕ :18–01–2017ರಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಪೂರ್ವ ಪ್ರಾಥಮಿಕ (ಎಲ್.ಕೆ.ಜಿ) ಹಾಗೂ ಪ್ರಾಥಮಿಕ ಶಾಲೆಯ 1ನೇ ತರಗತಿ ಮಕ್ಕಳನ್ನು ದಾಖಲಾತಿ ಮಾಡಲು ಕರ್ನಾಟಕ ಶಿಕ್ಷಣ ಕಾಯ್ದೆ–1983ರ ನಿಯಮ–20ರನ್ವಯ ಆಯಾ ಶೈಕ್ಷಣಿಕ ವರ್ಷದ ಜೂನ್–1 ಕ್ಕೆ ಪೂರ್ವ ಪ್ರಾಥಮಿಕ(ಎಲ್.ಕೆ.ಜಿ), 3 ವರ್ಷ 10 ತಿಂಗಳು, 1ನೇ ತರಗತಿಗೆ 5 ವರ್ಷ 10 ತಿಂಗಳು ಎಂಬುದಾಗಿ ವಯೋಮಿತಿಯನ್ನು ನಿಗದಿಪಡಿಸಿರುತ್ತಾರೆ.

ಮೇಲೆ ಓದಲಾದ (3)ರ ಜ್ಞಾಪನದಲ್ಲಿ, ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರು ದಿನಾಂಕ: 18–01–2017ರ ಸುತ್ತೋಲೆಯನ್ನು ಮಾರ್ಪಡಿಸಿ ಶೈಕ್ಷಣಿಕ ವರ್ಷ 2018–19ನೇ ಸಾಲಿನಿಂದ ಸರ್ಕಾರಿ, ಅನುದಾನಿತ,

ಅನುದಾನ ರಹಿತ ಶಾಲೆಗಳಲ್ಲಿ 1ನೇ ತರಗತಿಗೆ ನೇರವಾಗಿ ದಾಖಲಾಗುವ ಮಗುವು ಸಂಬಂಧಿಸಿದ ಶೈಕ್ಷಣಿಕ ವರ್ಷದ ಜೂನ್ 1 ರಂದು 5 ವರ್ಷ, 10 ತಿಂಗಳು ಪೂರ್ಣಗೊಂಡಿರಬೇಕೆಂದು ನಿಗದಿಪಡಿಸಲಾಗಿದೆ.

ಮುಂದುವರೆದು 2015-16 ಮತ್ತು 2016-17ನೇ ಸಾಲಿನಲ್ಲಿ ಎಲ್.ಕೆ.ಜಿಗೆ ಸೇರಿದ ಮಕ್ಕಳು ನಿಗಧಿತ ವಯೋಮಿತಿ 3 ವರ್ಷ 10 ತಿಂಗಳು ಪೂರ್ಣಗೊಳಿಸದೇ ಸ್ವ ಇಚ್ಛಾ ದಾಖಲಾತಿ ಪಡೆದುಕೊಂಡಿರುವುದರಿಂದ 1ನೇ ತರಗತಿಗೆ ಪ್ರವೇಶ ಪಡೆಯುವ ಸಂದರ್ಭದಲ್ಲಿ ನಿಗಧಿತ ವಯೋಮಾನ 5 ವರ್ಷ 10 ತಿಂಗಳು ಪೂರ್ಣಗೊಳಿಸದೇ ಇರುವ ಮಕ್ಕಳು 1ನೇ ತರಗತಿಗೆ ಪ್ರವೇಶ ಪಡೆಯಲು ಅರ್ಹತೆ ಹೊಂದಿರುವುದಿಲ್ಲ. ಈ ಹಿನ್ನೆಲೆಯಲ್ಲಿ ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ 2017-18ನೇ ಸಾಲಿಗೆ ಮಾತ್ರ ಅನ್ವಯವಾಗುವಂತೆ 1ನೇ ತರಗತಿಗೆ ದಾಖಲಾಗುವ ಮಕ್ಕಳ ವಯೋಮಿತಿಯನ್ನು 5 ವರ್ಷ 5 ತಿಂಗಳು ನಿಗಧಿಪಡಿಸಲಾಗಿತ್ತು, ಕೇಂದ್ರಿಯ ವಿದ್ಯಾಲಯದಲ್ಲಿ 1ನೇ ತರಗತಿಗೆ ದಾಖಲಾಗಲು ಮಗುವಿಗೆ ಮಾರ್ಚ್ 31ಕ್ಕೆ ಕನಿಷ್ಠ 5 ವರ್ಷಗಳು, ಗರಿಷ್ಠ 7 ವರ್ಷಗಳ ವಯೋಮಿತಿಯನ್ನು ನಿಗಧಿಪಡಿಸಲಾಗಿದೆ. ಅದರಂತೆ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಇಡಿ 708 ಪಿಜಿಸಿ 2017, ಬೆಂಗಳೂರು ದಿನಾಂಕ: 23-05-2018**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಶಿಕ್ಷಣ ಕಾಯ್ದೆ-1983ರ ನಿಯಮ 20ರಂತೆ ಹಾಗೂ ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ 2009 ಸೆಕ್ಷನ್ 12(1) ಅಡಿಯಲ್ಲಿ 2018-19ನೇ ಶೈಕ್ಷಣಿಕ ಸಾಲಿನಿಂದ ಜಾರಿಗೆ ಬರುವಂತೆ ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳಲ್ಲಿ 1ನೇ ತರಗತಿಗೆ ದಾಖಲಾಗಲು ಮಗುವಿಗೆ ಕನಿಷ್ಠ ವಯೋಮಿತಿಯನ್ನು 5 ವರ್ಷ 5 ತಿಂಗಳು ಹಾಗೂ ಗರಿಷ್ಠ 7 ವರ್ಷಗಳಿಗೆ ನಿಗಧಿಪಡಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಎ.ನಾಗೇಶ ರಾವ್**
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ (ಪ್ರಾಥಮಿಕ)

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) ಪ್ರತಿಗಳು: 500